ಅ) ದಂಡಿಗನಹಳ್ಳಿ ಗ್ರಾಮದ ಪಕ್ಕದಲ್ಲಿ ಜಲ್ಲಿ ಹೊಡೆಯುವ ಕ್ರಷರ್‌ನಲ್ಲಿ ಊರಿನ ಜನರೆಲ್ಲರೂ ಕೂಲಿ ಮಾಡುತ್ತಿದ್ದು, ಈ ಹಣವನ್ನೆಲ್ಲ ಶರಾಬು ಕುಡಿಯಲು ಗಂಡಸರು ಉಪಯೋಗಿಸುತ್ತಿದ್ದು ಇದರಿಂದ ಈ ಊರಿನ ಸ್ತ್ರೀಯರುಗಳಿಗೆ ಆಘಾತವಾಗಿದ್ದು, ಸಂಸಾರಗಳೇ ಹಾಳಾಗುತ್ತಿರುವುದು ನಿಜವಲ್ಲವೇ?

ಆ) ಈ ಗ್ರಾಮದ ಸ್ತ್ರೀಶಕ್ತಿ ಸಂಘಟನೆಯ ಹೆಂಗಸರುಗಳು ಗ್ರಾಮದ ಆರ್ಥಿಕಾಭಿವೃದ್ಧಿಗೆ ಹೆಚ್ಚು ಶ್ರಮಿಸುತ್ತಲಿದ್ದ ಕಾರಣ ಇವರಿಗೆ ಎಲ್ಲಾ ವಿಧವಾದ ಪ್ರೋತ್ಸಾಹವನ್ನು ಸರ್ಕಾರ ಕೊಡಬೇಕಾಗಿರುವುದು ನ್ಯಾಯ ಸಮ್ಮತವಲ್ಲವೇ?

ಈ) ಈ ದಿಶೆಯಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳಾವುವು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಹೌದು

ಆ) ಇವು ಸರ್ಕಾರದ ಗಮನಕ್ಕೆ ಬಂದಿಲ್ಲ.

ಇ) ಹೌದು

ಈ) ಪ್ರೋತ್ಸಾಹಿಸುವ ಸಲುವಾಗಿ ಈ ಸಾಲಿನಲ್ಲಿ ಬಂಡಿಗನಹಳ್ಳಿ ಗ್ರಾಮದಲ್ಲಿ ಸಾರಾಯಿ ಅಂಗಡಿ ಸನ್ನದು ನೀಡಿರುವುದಿಲ್ಲ.

ಹಾಸನ ವಿಧಾನಸಭಾ ಕ್ಷೇತ್ರದಲ್ಲಿ ಪಡಿತರ ಪದಾರ್ಥಗಳನ್ನು ದುರುಪಯೋಗ ಮಾಡಿಕೊಂಡಿರುವುದು.

2348(2871) ಶ್ರೀ ಹನುಮೇಗೌಡ ಕೆ.ಹೆಚ್. (ಹಾಸನ) :— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹಾಸನ ವಿಧಾನ ಸಭಾ ಕ್ಷೇತ್ರದ ಕಸಬಾ ಕಟ್ಟಾಯ ಮತ್ತು ಶಾಂತಿಗ್ರಾಮ ಹೋಬಳಿಗಳಲ್ಲಿರುವ ನ್ಯಾಯಬೆಲೆ ಅಂಗಡಿಗಳ ಮಾಲೀಕರು ಪಡಿತರ ಪದಾರ್ಥಗಳನ್ನು ದುರುಪಯೋಗಪಡಿಸಿಕೊಂಡಿರುವ ಬಗ್ಗೆ ದೂರುಗಳು ಬಂದಿದೆಯೆ; (ವಿವರ ಒದಗಿಸುವುದು)

ಆ) ದೂರು ಬಂದಿರುವ ನ್ಯಾಯಬೆಲೆ ಅಂಗಡಿ ಮಾಲೀಕರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; ವಿವರ ನೀಡುವುದು)

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :—

ಅ) ಹೌದು.

ಹಾಸನ ವಿಧಾನ ಸಭಾ ಕ್ಷೇತ್ರದ ಕಟ್ಟಾಯ ಹೋಬಳಿಯ ಝಾನ್ಸಿರಾಣಿ ಲಕ್ಷ್ಮಿಬಾಯಿ ಯುವತಿ ಸಂಘ, ಉಪ್ಪಳ್ಳಿ ಹಾಗೂ ಶಾಂತಿಗ್ರಾಮ ಹೋಬಳಿಯ ಸಾವಂತನಹಳ್ಳಿ ಗ್ರಾಮದ ಸತೀಶ್ ನ್ಯಾಯಬೆಲೆ ಅಂಗಡಿ ಮತ್ತು ಶಾಂತಿಗ್ರಾಮದ ಶ್ರೀ ಶಾಮಣ್ಣರವರ ನ್ಯಾಯಬೆಲೆ ಅಂಗಡಿ ವಿರುದ್ಧ ಪಡಿತರ ಪದಾರ್ಥಗಳ ದುರುಪಯೋಗದ ಬಗ್ಗೆ ದೂರುಗಳು ಬಂದಿರುತ್ತವೆ.

ಅ) ಹಾಸನ ವಿಧಾನ ಸಭಾ ಕ್ಷೇತ್ರದ ಕಟ್ಟಾಯ ಹೋಬಳಿಯ ಝಾನ್ಸಿರಾಣಿ ಲಕ್ಷ್ಮಿಬಾಯಿ ಯುವತಿ ಸಂಘ, ಉಪ್ಪಳ್ಳಿ, ಹಾಗೂ ಶಾಂತಿ ಗ್ರಾಮ ಹೋಬಳಿಯ ಸಾವಂತನಹಳ್ಳಿ ಗ್ರಾಮದ ಸತೀಶ್‌ರವರ ನ್ಯಾಯಬೆಲೆ ಅಂಗಡಿ ಮತ್ತು ಶಾಂತಿ ಗ್ರಾಮದ ಶ್ರೀ ಶಾಮಣ್ಣನವರ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಸ್ತುಗಳ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಸಾಬೀತಾದ ಕಾರಣ ಮೂರೂ ನ್ಯಾಯಬೆಲೆ ಅಂಗಡಿಗಳ ಪ್ರಾಧೀಕಾರವನ್ನು ಅಮಾನತ್ತಿನಲ್ಲಿಡಲಾಗಿದೆ. ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಮೂರೂ ಪ್ರಕರಣಗಳು ವಿಚಾರಣಾ ಹಂತದಲ್ಲಿದ್ದು, ಅಮಾನತ್ತು ಆದೇಶ ಮುಂದುವರಿಯುತ್ತದೆ. ಪಡಿತರ ಚೀಟಿದಾರರಿಗೆ ಅನಾನುಕೂಲವಾಗದಂತೆ ಈ 3 ನ್ಯಾಯಬೆಲೆ ಅಂಗಡಿಗಳ ಪಡಿತರ ಚೀಟಿದಾರರಿಗೆ ಸಮೀಪದ ನ್ಯಾಯಬೆಲೆ ಅಂಗಡಿಗಳ ಮುಖಾಂತರ ಪರ್ಯಾಯ ವ್ಯವಸ್ಥೆ ಮಾಡಿ ಪಡಿತರ ವಸ್ತುಗಳನ್ನು ವಿತರಿಸಲಾಗುತ್ತಿದೆ.

ರಾಜ್ಯದಲ್ಲಿ ಅಬಕಾರಿಯಿಂದ ಬಂದ ಆದಾಯ.

2349(2796) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಬಂದ ಆದಾಯವೆಷ್ಟು (ಜಿಲ್ಲಾವಾರು ವಿವರ ನೀಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಬಂದ ಆದಾಯದ ವಿವರ ಈ ಕೆಳಕಂಡಂತಿದೆ.

ವರ್ಷ	ಆದಾಯ (ಕೋಟಿ ರೂ.ಗಳಲ್ಲಿ)
1998-99	1019.11
1999-2000	1233.55
2000-2001	1550.23

(ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.